**<u>ದಿನಾಂಕಃ 11.10.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ. ಎಸ್.ಬಿ.ಎಸ್ ವಕೀಲರಿಂದಃ</u>**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ತಿಳಿದು ಸಹಿ ಮಾಡಿರುತ್ತೇನೆ.

ದಿನಾಂಕ 02.06.1989 ರ ಮೂಲ ಕ್ರಯ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಡಿ-29 ಎಂದು, ದಿನಾಂಕ 04.11.1981 ರ ವಿಭಾಗ ಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಡಿ-30 ಎಂದು, 2003-04 ನೇ ಸಾಲಿನ ಡಿಮ್ಯಾಂಡ್ ರಿಜಿಸ್ಟರ್ ನ ದೃಡೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಡಿ-31 ಎಂದು, 2 ರಶೀದಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಡಿ 32 , ನಿಡಿ-33 ಎಂದು , ಮನೆ ಕಟ್ಟಡದ ಅನುಮತಿ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಡಿ-34 ಎಂದು, ಭಾವಚಿತ್ರಗಳ ನೆಗೆಟೀವ್ ಅನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಡಿ-35 ಎಂದು, ದಿನಾಂಕ 05.05.1955 ರ ವಿಭಾಗ ಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಡಿ-36 ಎಂದು, ಕಚ್ಚಾ ನಕಾಶೆಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಡಿ-37 ಎಂದು, ಸ್ಪೆಷಲ್ ಪವರ್ ಅಪ್ ಅಟಾರ್ನಿ ಹಾಜರುಪಡಿಸುತ್ತಿದ್ದು ಅದನ್ನು ನಿಡಿ-38 ಎಂದು , 10 ಭಾವಚಿತ್ರಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಡಿ-39 ರಿಂದ ನಿಡಿ-48 ಎಂದು, ಒಂದು ಸಿ ಡಿ ಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಡಿ-49 ಎಂದು, ಒಂದು ರಶೀದಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಡಿ-50 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಪಾಟಿ ಸವಾಲಿಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

**ಮರುವಿಚಾರಣೆಃ** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಲಯ, ಟಿ ನರಸಿಪುರ